ಕರ್ನಾಟಕ ಸರ್ಕಾರ

ದಿನಾಂಕ: 08-07-2017

# ನ್ಯಾಯಾಂಗ ವ್ಯವಸ್ಥೆಗೆ ಮೂಲಸೌಕರ್ಯ: ರಾಜ್ಯ ಸರ್ಕಾರ ಬದ್ಧ



ಬೆಂಗಳೂರು, ಜು, 8: ರಾಜ್ಯದ ನ್ಯಾಯಾಂಗ ವ್ಯವಸ್ಥೆ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಾದರೆ ಅದಕ್ಕೆ ಅಗತ್ಯ ಮೂಲಭೂತಸೌಕರ್ಯ ಒದಗಿಸುವುದು ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕಳೆದ ನಾಲ್ಕು ವರ್ಷಗಳಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರಿಂದು ಬೈಯಪ್ಪನಹಳ್ಳಿಯ ಎನ್‌ಜಿಇಎಫ್ ಲೇಔಟ್‌ನಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಸಿಬ್ಬಂದಿ ವಸತಿ ಸಮುಚ್ಚಯ ಉದ್ಘಾಟಿಸಿ ಮಾತನ್ನಾಡುತ್ತಾ, ಕಳೆದ ನಾಲ್ಕು ವರ್ಷಗಳಲ್ಲಿ 333 ನ್ಯಾಯಾಲಯ ಕಟ್ಟಡ ಮತ್ತು ನ್ಯಾಯಾಂಗ ಸಿಬ್ಬಂದಿ ವರ್ಗದವರ 675 ವಸತಿ ಗೃಹ ಸೇರಿದಂತೆ ಈಗಾಗಲೇ ಪೂರ್ಣಗೊಂಡಿರುವ 192 ವಸತಿ ಗೃಹಗಳನ್ನು ನಿರ್ಮಿಸಲಾಗಿದ್ದು, ಇದಕ್ಕೆ ಸುಮಾರು 1500ಕೋಟಿ ರೂಗಳನ್ನು ಖರ್ಚುಮಾಡಲಾಗಿದೆ ಎಂದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರಸ್ತೆಗಳು, ಸೇತುವೆಗಳು, ಕಟ್ಟಡಗಳನ್ನು ಆದ್ಯತೆಯ ಮೇರೆಗೆ ಲೋಕೋಪಯೋಗಿ ಇಲಾಖೆ ಮೂಲಕ ನಿರ್ಮಿಸಿದ್ದೇವೆ. ಯಾವುದೇ

ಸಮಾಜದ ಆರ್ಥಿಕ ಬೆಳವಣಿಗೆಯಾಗಬೇಕಾದರೆ ಮೂಲಭೂತ ಸೌಕರ್ಯ ಅತ್ಯಗತ್ಯ ಎಂಬುದನ್ನು ನಮ್ಮ ಸರ್ಕಾರ ಮನಗಂಡಿದೆ ಎಂದು ಅವರು ತಿಳಿಸಿದರು.

ನ್ಯಾಯಾಂಗ ಇಲಾಖೆಯ ಯೋಜನೆಗಳಿಗೆ ಕೇಂದ್ರ ಸರ್ಕಾರ 1016 ಕೋಟಿ ರೂಗಳ ಪೈಕಿ 463 ಕೋಟಿ ರೂಗಳನ್ನಷ್ಟೇ ನೀಡಿದೆ. ಆದರೆ ಕೇಂದ್ರದ ನೆರವಿಗೆ ಕಾಯದೆ ರಾಜ್ಯ ಸರ್ಕಾರ ತನ್ನ ಖಜಾನೆಯಿಂದ ಹಣ ಭರಿಸಿ ಕೋರ್ಟ್ ಕಟ್ಟಡಗಳನ್ನು ನಿರ್ಮಿಸಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

191 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಉಚ್ಚ ನ್ಯಾಯಾಲಯದ ಸಿಬ್ಬಂದಿ ವಸತಿ ಗೃಹ ಒಂಭತ್ತು ಅಂತಸ್ತಿನ ಅತಿ ದೊಡ್ಡ ವಸತಿ ಸಮುಚ್ಚಯವಾಗಿದ್ದು, ಇದರಲ್ಲಿ ಲಿಫ್ಟ್ ಸೌಲಭ್ಯ, ಮಳೆನೀರು ಕೊಯಿಲು ವ್ಯವಸ್ಥೆ ಮಾಡಲಾಗಿದೆ, ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನೂ ಸಹ ಒಳಗೊಂಡ ಈ ವಸತಿ ಸಮುಚ್ಚಯ ದೇಶಕ್ಕೆ ಪ್ರಥಮ ಎನಿಸಿದೆ ಎಂದರು.

ಲೋಕೋಪಯೋಗಿ ಸಚಿವ ಡಾ: ಹೆಚ್.ಸಿ. ಮಹದೇವಪ್ಪ ಅವರು ಮಾತನಾಡಿ ಕಳೆದ ನಾಲ್ಕು ವರ್ಷದ ಅವಧಿಯಲ್ಲಿ 1500 ಕೋಟಿ ರೂ. ಅಂದಾಜಿನಲ್ಲಿ ವಿವಿಧ ನ್ಯಾಯಾಲಯ ಕಟ್ಟಡಗಳನ್ನು ಸ್ಥಾಪಿಸಲಾಗಿದ್ದು, ನ್ಯಾಯಾಂಗ ವ್ಯವಸ್ಥೆಯ ಮೂಲ ಸೌಕರ್ಯ ಕಲ್ಪಸುವಲ್ಲಿ ರಾಜ್ಯ ಸರ್ಕಾರ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ ಎಂದರು.

ನ್ಯಾಯಾಂಗ ಇಲಾಖೆಯ ಸಿಬ್ಬಂದಿಯ ಈ ವಸತಿ ಸಮುಚ್ಛಯವನ್ನು 2014 ರಲ್ಲಿ ಕಟ್ಟಲು ಪ್ರಾರಂಭಿಸಿ 2017 ರಲ್ಲಿ ಪೂರ್ಣಗೊಳಿಸಿ ನಾವೇ ಇಂದು ಉದ್ಘಾಟನೆ ಮಾಡುತ್ತಿರುವುದು ಸಂತಸ ತಂದಿದೆ ಎಂದ ಅವರು, ಈ ವಸತಿ ಸಮುಚ್ಛಯದಲ್ಲಿ ನ್ಯಾಯಾಂಗ ಇಲಾಖೆಯ ಬಿ ವರ್ಗ, ಸಿ ವರ್ಗ, ಮತ್ತು ಡಿ ವರ್ಗದ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ಆದ್ಯತೆಯ ಮೇರೆಗೆ ನಿರ್ಮಿಸಲಾಗಿದೆ ಎಂದರು.

ಸಚಿವ ಟಿ.ಬಿ. ಜಯಚಂದ್ರ ಅವರು ಮಾತನಾಡಿ ನ್ಯಾಯಾಂಗ ವ್ಯವಸ್ಥೆಯು ಮುಂದಿಡುವ ಎಲ್ಲ ಮನವಿಗಳನ್ನು ರಾಜ್ಯ ಸರ್ಕಾರ ಗೌರವಿಸಿ ಕಳೆದ ನಾಲ್ಕು ವರ್ಷದಿಂದ ಅನುಷ್ಠಾನ ಮಾಡಿದೆ ಎಂದರು.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಮೋಹನ್ ಎಂ. ಶಾಂತನಗೌಡರ್ ಅವರು ಮಾತನಾಡಿ, ನ್ಯಾಯಾಂಗ ಇಲಾಖೆಯ ಈ ವಸತಿ ಸಮುಚ್ಚಯ ನೀರು, ವಿದ್ಯುತ್, ಮಳೆನೀರು ಕೊಯ್ಲು ಮುಂತಾದ ಸಕಲ ಸೌಕರ್ಯಗಳನ್ನು ಒಳಗೊಂಡಿದ್ದು, ಮೆಟ್ರೋ ನಿಲ್ದಾಣವನ್ನು ಸಮೀಪದಲ್ಲೇ ಒಳಗೊಂಡಿದೆ. ಇಷ್ಟೆಲ್ಲಾ ಸೌಲಭ್ಯಗಳನ್ನು ಒಳಗೊಂಡಿರುವ ಈ ವಸತಿ ಸಮುಚ್ಛಯದಲ್ಲಿ ವಾಸಿಸುವ ನೌಕರರು ಸಹಬಾಳ್ವೆಯಿಂದ ಜೀವನ ಮಾಡಬೇಕು ಎಂದು ಕಿವಿ ಮಾತು ಹೇಳಿದರು.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಎಸ್. ಅಬ್ದುಲ್ ನಜೀರ್ ಅವರು ಮಾತನಾಡಿ, ನ್ಯಾಯಾಂಗ ಸಿಬ್ಬಂದಿಯ ಈ ವಸತಿ ಸಮುಚ್ಛಯದಲ್ಲಿ ಸಮುದಾಯ ಭವನ ಮತ್ತು ಮಕ್ಕಳ ಆಟದ ಮೈದಾನದ ಕೊರತೆ ಇದ್ದು ಮುಂದಿನ ದಿನಗಳಲ್ಲಿ ಈ ಸೌಕರ್ಯವನ್ನು ಒದಗಿಸಿಕೊಡುವಂತೆ ನ್ಯಾಯಾಂಗ ಇಲಾಖೆಯ ಸಿಬ್ಬಂದಿಯ ಪರವಾಗಿ ಸರ್ಕಾರಕ್ಕೆ ಮನವಿಮಾಡಿದರು.

ಮುಂದುವರೆದು ಅವರು ಮಾತನ್ನಾಡುತ್ತಾ, ರಾಜ್ಯ ಸರ್ಕಾರ ಒದಗಿಸಿರುವ ಈ ಅನುಕೂಲವನ್ನು ಆನಂದಿಸಿರಿ ಮತ್ತು ಜವಾಬ್ದಾರಿಯನ್ನು ಮರೆಯದಿರಿ ಎಂದು ನ್ಯಾಯಾಂಗ ಇಲಾಖೆಯ ನೌಕರರಿಗೆ ಕರೆ ನೀಡಿದರು.

ಕರ್ನಾಟಕ ಉಚ್ಛ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಶ್ರೀ ಸುಬ್ರೋ ಕಮಲ್ ಮುಖರ್ಜಿ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ, ಲೋಕೋಪಯೋಗಿ ಇಲಾಖೆ ಮತ್ತು ನ್ಯಾಯಾಂಗ ಇಲಾಖೆಯ ನೌಕರರು ಒಟ್ಟಾಗಿ ಸೇರಿ ಈ ವಸತಿ ಸಮುಚ್ಛಯದ ನಿರ್ವಹಣೆಯನ್ನು ಮಾಡಬೇಕು ಮತ್ತು ಕಟ್ಟಡವನ್ನು ಜತನದಿಂದ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು. ಬೆಂಗಳೂರಿನಂತ ಮಹಾನಗರದಲ್ಲಿ ಸ್ವಂತ ಮನೆಯನ್ನು ಹೊಂದುವುದು ಪ್ರತಿಯೊಬ್ಬ ಮಧ್ಯಮ ವರ್ಗದವರ ಕನಸಾಗಿದ್ದು, ನ್ಯಾಯಾಂಗ ಇಲಾಖೆಯ ಸಿಬ್ಬಂದಿಯವರಿಗೆ ಇಷ್ಟು ಅನುಕೂಲತೆಯುಳ್ಳ ವಸತಿ ಸಮುಚ್ಛಯವನ್ನು ನಿರ್ಮಿಸಿಕೊಟ್ಟಿರುವ ರಾಜ್ಯ ಸರ್ಕಾರವನ್ನು ನಿಮ್ಮೆಲ್ಲರ ಪರವಾಗಿ ಶ್ಲಾಘಿಸುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಅಧ್ಯಕ್ಷರಾದ ನ್ಯಾಯಮೂರ್ತಿ ಎ.ಎಸ್. ಬೋಪಣ್ಣ, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಸದಸ್ಯರಾದ ನ್ಯಾಯಮೂರ್ತಿ ರವಿ ಮಳಿಮಠ್, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಸದಸ್ಯರಾದ ನ್ಯಾಯಮೂರ್ತಿ ಪಿ.ಎಸ್. ದಿನೇಶ್‌ಕುಮಾರ್, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಸದಸ್ಯರಾದ ನ್ಯಾಯಮೂರ್ತಿ ಜಾನ್ ಮೈಕಲ್ ಕುನ್ಹಾ, ಲೋಕೋಪಯೋಗಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ, ಎನ್. ಲಕ್ಷ್ಮೀನಾರಾಯಣ, ಕಾರ್ಯದರ್ಶಿ ಎಸ್.ಬಿ. ಸಿದ್ದಗಂಗಪ್ಪ ಸೇರಿದಂತೆ ವಿವಿಧ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮಮತ/ಕೆಎಂ

-------------------